ಚಿಕ್ಕಬಳ್ಳಾಪುರ ಜಿಲ್ಲೆ ಮುಜರಾಯಿ ದೇವಸ್ಥಾನ ಅಭಿವೃದ್ಧಿ

877 (534) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ): ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಮುಜರಾಯಿ ಇಲಾಖಾ ವ್ಯಾಪ್ತಿಗೆ ಬರುವ ದೇವಸಸ್ಥಾನಗಳ ಸಂಖ್ಯೆ ಎಷ್ಟು; ಈ ದೇವಾಲಯದ ಅಭಿವೃದ್ಧಿ ಇಲ್ಲದೆ ಭಕ್ತಾಧಿಗಳು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರತಿ ವರ್ಷ ಇದರ ಅಭಿವೃದ್ಧಿಗಾಗಿ ಮೀಸಲಾಗಿಟ್ಟಿರುವ ಅನುದಾನ ಎಷ್ಟು (ತಾಲ್ಲೂಕುವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು);

ಆ) ಬಾಗೇಪಲ್ಲಿ–ಗುಡಿಬಂಡೆ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವಂತಹ ಮುಜರಾಯಿ ಇಲಾಖಾ ವ್ಯಾಪ್ತಿಯ ದೇವಸ್ಥಾನಗಳು ಎಷ್ಟು ; ಕಳೆದ ಎರಡು ವರ್ಷಗಳಿಂದ ಇದರ ಅಭಿವೃದ್ಧಿಗೆ ಖರ್ಚು ಮಾಡಿರುವ ಅನುದಾನ ಎಷ್ಟು (ವಿವರ ನೀಡುವುದು);

ಇ) ಬಾಗೇಪಲ್ಲಿ–ಗುಡಿಬಂಡೆ ತಾಲ್ಲೂಕಿನಲ್ಲಿ ಉಳಿದಿರುವ ಇತರೇ ದೇವಸ್ಥಾನಗಳನ್ನು ಮುಜರಾಯಿ ಇಲಾಖಾ ವ್ಯಾಪ್ತಿಗೆ ಸೇರಿಸಲು ಏನು ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು):

ಡಾ: ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು):

ಅ) ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ 1069 ಮುಜರಾಯಿ ದೇವಸ್ಥಾನಗಳಿವೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತೆ ಇದೆ:–

ಕ್ರ.ಸಂ.	ತಾಲ್ಲೂಕು	ದೇವಸ್ಥಾನಗಳ ಸಂಖ್ಯೆ
1.	ಚಿಕ್ಕಬಳ್ಳಾಪುರ	200
2.	ಶಿಡ್ಲಘಟ್ಟ	206
3.	ಚಿಂತಾಮಣಿ	282

4.	ಗೌರಿಬಿದನೂರು	125
5.	ಬಾಗೇಪಲ್ಲಿ	102
6.	ಗುಡಿಬಂಡೆ	154
	ಒಟ್ಟು	1069

ಈ ದೇವಾಲಯಗಳ ಅಭಿವೃದ್ಧಿಗಾಗಿ ಯಾವುದೇ ಅನುದಾನ ಮೀಸಲಿಟ್ಟಿರುವುದಿಲ್ಲ. ದೇವಾಲಯಗಳ ಅಭಿವೃದ್ಧಿ ಅವಶ್ಯಕತೆಗನುಗುಣವಾಗಿ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುತ್ತದೆ.

ಆ) ಬಾಗೇಪಲ್ಲಿ ತಾಲ್ಲೂಕು ವ್ಯಾಪ್ತಿಯಲ್ಲಿ 102 ಮತ್ತು ಗುಡಿಬಂಡೆ ತಾಲ್ಲೂಕು ವ್ಯಾಪ್ತಿಯಲ್ಲಿ 154 ಮುಜರಾಯಿ ದೇವಾಲಯಗಳಿವೆ.

2008–09 ಮತ್ತು 2009–10ನೇ ಸಾಲಿನಲ್ಲಿ ಗುಡಿಬಂಡೆ ಮತ್ತು ಬಾಗೇಪಲ್ಲಿ ಕ್ಷೇತ್ರದ ಮುಜರಾಯಿ ದೇವಾಲಯಗಳಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ.

2010–11ನೇ ಸಾಲಿನಲ್ಲಿ ಬಾಗೇಪಲ್ಲಿ ಕ್ಷೇತ್ರದ ಶ್ರೀ ಅವುಲಕೊಂಡರಾಯಸ್ವಾಮಿ ದೇವಸ್ಥಾನ, ಎ.ಸಿದ್ದಪಲ್ಲಿ, ಗೂಳೂರು, ರೂ. 2.00 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ.

ಇ) ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕಿನಲ್ಲಿ ಉಳಿದಿರುವ ದೇವಾಲಯಗಳನ್ನು ಮುಜರಾಯಿ ಇಲಾಖಾ ವ್ಯಾಪ್ತಿಗೆ ಸೇರಿಸುವ ಬಗ್ಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ದೇವಸ್ಥಾನವನ್ನು ಅಭಿವೃದ್ಧಿಪಡಿಸುವುದು

878(1085) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ): ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭದ್ರಾವತಿ ಪಟ್ಟಣದಲ್ಲಿರುವ ಪ್ರಾಚೀನ ದೇವಸ್ಥಾನಗಳಾದ ಶ್ರೀ ಲಕ್ಷ್ಮೀನರಸಿಂಹ ದೇವಾಲಯ ಮತ್ತು ಹೊನ್ನೆಗುಡ್ಡ ದೇವಸ್ಥಾನ ಅಭಿವೃದ್ಧಿಪಡಿಸಲು ಹಲವಾರು ಬಾರಿ ಪತ್ರ ಬರೆದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;